ಬೈಂದೂರು ಕ್ಷೇತ್ರದ ಯಡ್ತರೆ ಸಹಕಾರ ಸಂಘದಲ್ಲಿ ಹೆಚ್ಚಿನ ಸಿಬ್ಬಂದಿ ಇರುವ ಬಗ್ಗೆ

2047(1879)

ಶ್ರೀ ಗೋಪಾಲ ಪೂಜಾರಿ ಕೆ.(ಬೈಂದೂರು): ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ರಾಜ್ಯದಲ್ಲಿರುವ ಒಟ್ಟು ಸಹಕಾರಿ ಸಂಸ್ಥೆಗಳು ಎಷ್ಟು? ಅವುಗಳಲ್ಲಿ ಲಾಭ ನಷ್ಟದಲ್ಲಿರುವ ಸಹಕಾರಿ ಸಂಸ್ಥೆಗಳು ಎಷ್ಟು?

2) ಬೈಂದೂರು ಕ್ಷೇತ್ರದ ಯಡ್ತರೆ ಸಹಕಾರಿ ಸಂಘ (ಬ್ಯಾಂಕ್)ನಲ್ಲಿ ಅವಶ್ಯಕತೆಗಿಂತ ಹೆಚ್ಚಿನ ಸಿಬ್ಬಂದಿಯಿರುವುದು ನಿಜವೇ? ಇದಕ್ಕೆ ನೇಮಕಾತಿಯಲ್ಲಿ ರೋಸ್ಟರ್ ಪದ್ಧತಿ ಅಳವಡಿಸಲಾಗಿದೆಯೆ?

3) ಹಾಗಿದ್ದಲ್ಲಿ ಇದನ್ನು ಸರಿಪಡಿಸಲು ತೆಗೆದುಕೊಳ್ಳುವ ಕ್ರಮಗಳೇನು?

ಶ್ರೀ ಡಿ.ಕೆ.ಶಿವಕುಮಾರ್ (ಸಹಕಾರ ಸಚಿವರು):

1) ದಿನಾಂಕ: 31-3-2001ರ ಅಂತ್ಯಕ್ಕೆ ರಾಜ್ಯದಲ್ಲಿ ಒಟ್ಟು 29,930 ಸಂಘಗಳು ಇವೆ. ಅವುಗಳಲ್ಲಿ 14,229 ಸಹಕಾರ ಸಂಘಗಳು ಲಾಭದಲ್ಲಿದ್ದು, 13,308 ಸಹಕಾರ ಸಂಘಗಳು ನಷ್ಟದಲ್ಲಿವೆ.

2) ಅವಶ್ಯಕತೆಗಿಂತ ಹೆಚ್ಚಿನ ಸಿಬ್ಬಂದಿ ಇರುವುದು ಕಂಡು ಬರುವುದಿಲ್ಲ.

ಭಾಗಶಃ ಅಳವಡಿಸಲಾಗಿದೆ.

3) ಗೌರವ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 7457:93ರ ಆದೇಶದ ಹಿನ್ನೆಲೆಯಲ್ಲಿ ಪ್ರಸ್ತುತ ಈ ಪ್ರಕರಣದಲ್ಲಿ ಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ತೆಂಗು ಬೆಳೆಗೆ ತಗಲಿರುವ ನುಸಿಪೀಡೆ ರೋಗ ನಿವಾರಣೆಗೆ ತೆಗೆದುಕೊಂಡಿರುವ ಕ್ರಮ.

238(2577)

ಶ್ರೀ ಪಿ.ಜಿ.ಆರ್.ಸಿಂಧ್ಯ(ಕನಕಪುರ): ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?